ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 18 ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ಖಂಡ 2ರಿಂದ 18ರ ವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2ರಿಂದ 18ರ ವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

(ಪ್ರಸ್ತಾವದ ಅಂಗೀಕಾರ)

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(2) ವಿದೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಆ) ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಹೆಚ್. ಕೆ. ಪಾಟೀಲ್ : ಸನ್ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದುಪಡಿ) ವಿಧೇಕವನ್ನು ಈಗಾಗಲೇ ಮಂಡಿಸಿದ್ದೇವೆ. ಇದರಲ್ಲಿ ಮುಖ್ಯಮಂತ್ರಿಗಳ ಸಂಬಳವನ್ನು 6,000 ದಿಂದ 12, 000 ಕ್ಕೆ ಹೆಚ್ಚಿಸುವುದಕ್ಕೆ ಮಂತ್ರಿಗಳ ಸಂಬಳವನ್ನು 5,000 ದಿಂದ 10,000ಕ್ಕೆ ಹೆಚ್ಚಿಸುವುದಕ್ಕೆ ರಾಜ್ಯ ಮಂತ್ರಿಗಳ ಸಂಬಳವನ್ನು 4,000 ದಿಂದ 8,000ಕ್ಕೆ ಹೆಚ್ಚಳ ಮಾಡುವುದಕ್ಕೆ ಡೆಪ್ಯುಟಿ ಮಿನಿಸ್ಟರ್ ರವರ ಸಂಬಳವನ್ನು ಮೂರುವರೆ ಸಾವಿರದಿಂದ ಎಳು ಸಾವಿರಕ್ಕೆ ಹೆಚ್ಚಿಸುವದಕ್ಕಾಗಿ ಹಾಗೂ ಟ್ರಾವೆಲಿಂಗ್ ಅಲೋಯನ್ಸ್ ಹಾಗೂ ಡೇಲಿ ಅಲೋಯನ್ಸ್‌ನಲ್ಲಾಗಿರತಕ್ಕಂಥ ಹೆಚ್ಚಳ, ಆ ಹೆಚ್ಚಳಗಳನ್ನು ಈ ಟ್ರಾವೆಲಿಂಗ್ ಅಲೋಯನ್ಸ್‌ನಲ್ಲಿ ಮಂತ್ರಿಗಳಿಗೆ ರೋಡ್ ಮೈಲೆಜ್ 8 ರೂಪಾಯಿಗಳಿಂದ 12 ರೂಪಾಯಿಗಳಿಗೆ ಹೆಚ್ಚುವರಿ ಮಾಡತಕ್ಕಂಥ, ಡೇಲಿ ಅಲೋಯನ್ಸ್ ಅನ್ನು 800 ರೂಪಾಯಿಗಳಿಂದ 1000 ರೂಪಾಯಿಗೆ ಹೆಚ್ಚಳ ಮಾಡತಕ್ಕಂಥ ಮಸೂದೆಯನ್ನು ಅದರ ಜೊತೆಗೆ ಇತ್ತೀಚೆಗೆ ಹೆಚ್ಚಿರತಕ್ಕಂಥ ಈ ಮನೆ ಬಾಡಿಗೆಯನ್ನು 10 ಸಾವಿರದಿಂದ 20 ಸಾವಿರಕ್ಕೆ ಹೆಚ್ಚಿಸತಕ್ಕಂಥ ಒಂದು ಮಸೂದೆಯನ್ನು ಈ ಸಂದರ್ಭದಲ್ಲಿ ಮಂಡಿಸಿದ್ದೇವೆ. ದಯಾಮಾಡಿ, ತಾವು ಅದಕ್ಕೆ ಒಪ್ಪಿಗೆ ನೀಡಬೇಕೆಂದು ಹೇಳಿ ತಮ್ಮಲ್ಲಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

" 2005ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 8ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ " ಖಂಡ 2 ರಿಂದ 8ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(3) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಇ) ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ) ತಿದ್ದುಪಡಿ) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "2005ರ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚೀಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಎಕ್ಸ್‌ಪ್ಲೇನ್ ಮಾಡುತ್ತೀರಾ ? ಮಾಡಿ.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, 2005ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಈ ಸಂದರ್ಭದಲ್ಲಿ ಮಂಡಿಸಿದ್ದೇವೆ. ಈ ಒಂದು ಕ್ರಿಮಿನಲ್ ಪ್ರೋಸೀಜರ್ ಕೋಡ್‌ಗೆ ತಿದ್ದುಪಡಿ ತರತಕ್ಕಂಥ ಉದ್ದೇಶ ಅಂದರೆ, ಈಗಾಗಲೇ ನಾವು ನಮ್ಮ ರಾಷ್ಟ್ರದ ಅನೇಕ ನ್ಯಾಯಾಲಯಗಳಲ್ಲಿ ಅದರಲ್ಲೂ ವಿಶೇಷವಾಗಿ ಈ ಕ್ರಿಮಿನಲ್ ಜಸ್ಟೀಸ್ ವಿಚಾರದಲ್ಲಿ ಏನೊಂದು ಬದಲಾವಣೆಯಾಗಬೇಕು, ಸಮಗ್ರವಾದ ತಿದ್ದುಪಡಿಗಳಾಗಬೇಕು ಎನ್ನುವುದರ ಬಗ್ಗೆ ಅನೇಕ ಲಾ ಕಮಿಷನ್‌ಗಳು ಪ್ರಸ್ತಾಪ ಮಾಡಿವೆ. ಸನ್ಮಾನ್ಯ ಮಳಿಮಠ್‌ರವರು ಹಲವಾರು ಶಿಫಾರಸ್ಸುಗಳನ್ನು ಮಾಡಿದ್ದಾರೆ. ಈ ಸದನದಲ್ಲೂ ಸಹಿತ ಹಲವಾರು ಸಂದರ್ಭಗಳಲ್ಲಿ ಅಗಿರತಕ್ಕಂಥ, ನೀಡಿರತಕ್ಕಂಥ ಸಲಹೆಗಳ ಹಿನ್ನೆಲೆಯೊಳಗೆ ನಾವು ನಮ್ಮ ರಾಜ್ಯದ ವಿಶೇಷ ತಿದ್ದುಪಡಿಯಾಗಿ ಈ ಕಾನೂನು ಇಲಾಖೆಯವರು ಏನೊಂದು ನೀತಿಯನ್ನು ರೂಪಿಸಿದ್ದರು, ಆ ನೀತಿಯ ಹಿನ್ನೆಲೆಯೊಳಗೆ ಶಿಕ್ಷೆ ಚೌಕಾಸಿಗೆ ಅನುಕೂಲ ಮಾಡಿ, ಈ ವಿಧೇಯಕವನ್ನು ತಮ್ಮೆದುರು ಮಂಡಿಸಿದ್ದೇವೆ. ಬೇರೆ ಬೇರೆ ಭಾಗಗಳಲ್ಲಿ ರಾಷ್ಟ್ರಗಳಲ್ಲಿ ಎಲ್ಲಿ ಈ plea bargaining ಇದೆ, ಶಿಕ್ಷೆ ಚೌಕಾಸಿ